# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ :- 21/12/2020 ರಂದು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ 60ರ ವಾರ್ಡ್ ಸಮಿತಿ ಸಭೆಯ ನಡುವಳಿ

ಸಭೆಗೆ ಹಾಜರಿದ್ದ ಅಧಿಕಾರಿಗಳು :

1. ಶ್ರೀಮತಿ. ಸ್ಮಿತ ನೋಡಲ್ ಅಧಿಕಾರಿಗಳು
2. ಶ್ರೀ. ಅನಂದ ಕಿರಿಯ ಅಭಿಯಂತರರು ಬೆಸ್ಕಾಂ

ಬೃಪತ್ ಬೆಂಗಳೂರು ಮಹಾನಗರ ಪಾಲಿಕೆ ನೋಡಲ್ ಅಧಿಕಾರಿರವರು ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿದರು. ವಾರ್ಡ್–60 ರ ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಕಛೇರಿಯಲ್ಲಿ ನಡೆಸಲಾಯಿತು.

❖ ಕಾರ್ಯಸೂಚಿಗಳು :

1. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ನಂ:10096/2020 (GIM-PIL) ರ ನಿರ್ದೇಶನದಲ್ಲಿ ತಿಳಿಸಿರುವಂತೆ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ Begging and Hawking Childern Identification Survey ಕೈಗೋಳ್ಳಬೇಕಾಗಿದ್ದು ವಾರ್ಡ್‌ಗಳಲ್ಲಿ ಟ್ರಾಫಿಕ್ ಸಿಗ್ನಲ್‌ಗಳಲ್ಲಿ ಕೊಳಗೇರಿಗಳಲ್ಲಿ (ಸ್ಲಂ), ಬಸ್ ಮತ್ತು ರೈಲ್ವೆನಿಲ್ದಾಣ ಹಾಗೂ ಇತರೆ ಸ್ಥಳಗಳನ್ನು ಸ್ಥಳಿಯ ನಿವಾಸಿ ಕಲ್ಯಾಣ ಸಂಘ ( Residential Welfare Association ) ಹಾಗೂ ಸ್ವಯಂ ಸೇವಾ ಸಂಘಗಳ ( NGO ) ಮುಖೇನ ಗುರುತಿಸಿ ನಿಗಧಿತ ನಮುನೆಯಲ್ಲಿ ಮಾಹಿತಿಯನ್ನು ಕಲೆಹಾಕಲು ಕ್ರಮ ವಹಿಸುವುದು.
2. ಮಾನ್ಯ ಉಚ್ಚ ನ್ಯಾಯಾಲಯದ ರಿಟ್ ಪಿಟಿಷನ್ ನಂ 15768/2013 ರ ಹಿನ್ನಲೆಯಲ್ಲಿ ಹೊರಡಿಸಲಾದ ಸರ್ಕಾರದ ಆದೇಶದಲ್ಲಿ 2020–21 ನೇ ಸಾಲಿನಲ್ಲಿ ಶಾಲೆಯಿಂದ ಹೊರಗುಳಿದಿರುವ ಮಕ್ಕಳನ್ನು ಗುರುತಿಸಿ, ಶಾಲೆಗೆ ಹಾಜರಾಗಲು ನಗರ ಸ್ಥಳೀಯ ಸಂಸ್ಥೆಗಳು (ಬಿ.ಬಿ.ಎಂ.ಪಿ ಒಳಗೊಂಡಂತೆ) ವಾರ್ಡ್ ಸದಸ್ಯರನ್ನು ಅದರ ಅಧ್ಯಕ್ಷರನ್ನಾಗಿ ವಾರ್ಡ್ ಕಮಿಟಿಯನ್ನು ರಚಿಸತಕ್ಕದ್ದು.ಆ ವಾರ್ಡ್ ವ್ಯಾಪ್ತಿಯ ಮುಖ್ಯೋಪಾಧ್ಯಾಯರು, ಅಂಗನವಾಡಿ ಕಾರ್ಯಕರ್ತರು ಎನ್.ಜಿ.ಓ ಗಳನ್ನು ಸದಸ್ಯರನ್ನಾಗಿ ಮಾಡಿಕೊಂಡು ಕಾಲಕಾಲಕ್ಕೆ ಸದರಿ ಸಮಿತಿಯು ಕಾಲಕಾಲಕ್ಕೆ ತಪಾಸಣೆ ನಡೆಸಿ, ಶಾಲೆಯಿಂದ ವಂಚಿತರಾದ ಹಾಗೂ ಕಟ್ಟಡ ನಿರ್ಮಾಣ ಸ್ಥಳಗಳಲ್ಲಿ ಬಸ್ ನಿಲ್ದಾಣ ರೈಲ್ವೇ ನಿಲ್ದಾಣ ಕಾರ್ಖಾನೆಗಳು ಮಾರುಕಟ್ಟೆ ಮುಂತಾದ ಸ್ಥಳಗಳಲ್ಲಿ ಮಕ್ಕಳನ್ನು ಗುರುತಿಸಿ ಸಂಬಂದಿಸಿದ ಇಲಾಖೆಗಳಾದ ಮಕ್ಕಳ ಕಲ್ಯಾಣಾಧಿಕಾರಿ ( CDPO ) ಕಾರ್ಮಿಕ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ತಿಳಿಸುವ ಬಗ್ಗೆ ಕ್ರಮ ವಹಿಸುವುದುಎಂಬುದಾಗಿ ಇದ್ದು, ಇದಕ್ಕೆ ಪ್ರತ್ಯೇಕವಾದ ಸಿದ್ದಪಡಿಸಲಾಗಿದ್ದು ಸಧದಲ್ಲೇ ಈ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆ ಪೂರ್ವಸಿದ್ದತೆಗಳನ್ನು ಮಾಡಿಕೊಳ್ಳತಕ್ಕದ್ದು ಹಾಗೂ ಸಭೆಯಲ್ಲಿ ಚರ್ಚಿಸುವುದು.
3. ವಾರ್ಡಿನ ವ್ಯಾಪ್ತಿಯಲ್ಲಿ ಪ್ರದೇಶದಲ್ಲಿ ರಾತ್ರಿಹೊತ್ತು ತಪಾಸಣೆ ಕೈಗೊಂಡು ಬೀದಿ ಬದಿ ಮಲುಗುವವರ ನಿರಾಶ್ರಿತರ ಸಂಖ್ಯೆಯನ್ನು ಕಲೆಹಾಕಲು ಅಗತ್ಯ ಕ್ರಮಹಿಸುವುದು.

ಕ್ರಮ : ಈ ಮೇಲೆ ಸೂಚಿಸಿರುವಂತಹ ಕಾರ್ಯಸೂಚಿಗಳನ್ನು ಕೂಡಲೆ ಕಾರ್ಯಚರಣೆ ತರಬೇಕಾಗಿ ವಾರ್ಡ್ ಸಮಿತಿ ಸಭೆಗೆ ಹಾಜರಿದ್ದ ಎಲ್ಲಾ ಸಾರ್ವಜನಿಕರು ಹಾಗೂ ಅಧಿಕಾರಿಗಳಿಗೆ ಸೂಚಿಸಿದರು ಹಾಗೂ ಎಲ್ಲಾ ಸಾರ್ವಜನಿಕರು ಹಾಗೂ ಅಧಿಕಾರಿಗಳು ಸಕಾರಾತ್ಮಕ ಪ್ರತಿಕ್ರಿಯೆ ನೀಡಿದರು.

➢ <u>ಆರೋಗ್ಯ ಇಲಾಖೆಗೆ ಸಂಬಂಧಿಸಿರುವುದು</u>

1. ವಾರ್ಡ್ ವ್ಯಾಪ್ತಿಯ ರಿಚ್ಚರ್ಡ್ ಪಾರ್ಕ್‌ನ ಸುತ್ತಮುತ್ತ ಸಾಯಂಕಾಲ ಹಾಗೂ ಶನಿ. ಭಾನುವಾರದಂದು ಜನಸಾಂದ್ರತೆ ಹೆಚ್ಚಾಗಿ ಇದ್ದು ಕಸವನ್ನು ಟ್ರೀಗಾರ್ಡ್‌ನಲ್ಲಿ ತುಂಬುತ್ತಿದ್ದು ಕೂಡಲೆ ವಹಿಸಲು ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯ ಸುಂದರ ಆಸ್ಪತ್ರೆ ಮುಂದಿನ ಖಾಲಿ ಜಾಗದಲ್ಲಿ ಕಸದ ಬ್ಲಾಕ್‌ಸ್ಪಾಟಾಗಿ ಪರಿವರ್ತನೆಗೊಳ್ಳುವುದನ್ನು ತಡೆಹಿಡಿಯಲು ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯ ಮುಖ್ಯ ರಸ್ತೆಗಳಲ್ಲಿ ಕಸ ನಿರ್ವಹಣೆ ಸರಿಯಾಗಿ ಆಗುತ್ತಿಲ್ಲ ಕೂಡಲೆ ಕ್ರಮ ವಹಿಸಲು ಸೂಚಿಸಿದರು.
4. ವಾರ್ಡ್ ವ್ಯಾಪ್ತಿಯ ಡೇವಿಸ್ ರಸ್ತೆಯ ಖಾಳಿ ಇರುವ ಜಾಗ ಸೈಟ್ ಸಂಖ್ಯೆ 02 ರಲ್ಲಿ ಕಸ ಹೆಚ್ಚಾಗಿ ತುಂಬಿದ್ದು ಕೂಡಲೆ ತೇರೆವುಗೊಳಿಸಲು ಸೂಚಿಸಿದರು.
5. ವಾರ್ಡ್ ವ್ಯಾಪ್ತಿಯ ಕನರ್ಸರ್ವೆನ್ಸಿ ಲೇನ್‌ಗಳನ್ನು ಸ್ವಚ್ಛಗೊಳಿಸಲು ಸೂಚಿಸಿದರು.

ಕ್ರಮ : ಕಿರಿಯ ಆರೋಗ್ಯ ಪರೀವಿಕ್ಷಕರು ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸಲು ಈ ಸಭೆ ಮುಖಾಂತರ ಸೂಚಿಸಿದರು.

➢ <u>ಪೋಲೀಸ್ ಇಲಾಖೆಗೆ (ಸಿವಿಲ್) ಸಂಬಂಧಿಸಿರುವುದು</u>

1. ವಾರ್ಡ್ ವ್ಯಾಪ್ತಿಯಲ್ಲಿ ಗಾಂಜಾ ಹಾಗೂ ಮದ್ಯ ಕುಡಿಯುವುದು ಹಾಗೂ ನಿಲುಗಡೆ ವಾಹನಗಳಿಗೆ ಹಾನಿ ಉಂಟು ಮಾಡುವುದು.... ಇನ್ನೂ ಇತರೆ ಅಸ್ಯೆಂಗಿಕ ಕಾರ್ಯಾಚರಣೆ ನಡೆಯುತ್ತಿದ್ದು ಇವುಗಳ ಮೇಲೆ ಕೂಡಲೆ ಕ್ರಮ ಕೈಗೊಳ್ಳಲು ಸೂಚಿಸಿದರು.
2. ವಾರ್ಡ್ ವ್ಯಾಪ್ತಿಯಲ್ಲಿ ಕಳ್ಳತನ ಹೆಚ್ಚಾಗುತ್ತಿದ್ದು ಪೋಲೀಸ್ ಬೀಟ್ ಹಾಕುವುದನ್ನು ಹೆಚ್ಚಿಸಲು ಅಧಿಕಾರಿ ವರ್ಗದವರಿಗೆ ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸುವಂತೆ ಈ ಸಭೆ ಮುಖಾಂತರ ಸೂಚಿಸಲಾಯಿತು.

➢ <u>ಕಾಮಗಾರಿ ಇಲಾಖೆಗೆ ಸಂಬಂಧಿಸಿರುವುದು</u>

1. ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ನಿರ್ಮಾಣವಾಗಿರುವ ಕಟ್ಟಡ ಸಂಖ್ಯೆ 15 ಕ್ಲಾರ್ಕ್ ರಸ್ತೆ, ಸದರಿ ಕಟ್ಟಡ ಮೇಲೆ ಕೈಗೊಂಡಿರುವ ಕ್ರಮದ ಬಗ್ಗೆ ತಿಳಿಸಲು ಸೂಚಿಸಿದರು. (ಕೆ.ಎಂ.ಸಿ ಕಾಯ್ದೆ ಅಡಿ ಕ್ರಮವಹಿಸಿದ್ದೇನೆ ಎಂದು ತಿಳಿಸಿದರು)
2. ವಾರ್ಡ್ ವ್ಯಾಪ್ತಿಯ ರಿಚ್ಚರ್ಡ್ ಪಾರ್ಕ್ ಶೌಚಾಲಯವನ್ನು ನವೀಕರಣಗೋಳಿಸಲು ಸೂಚಿಸಿದರು.
3. ವಾರ್ಡ್ ವ್ಯಾಪ್ತಿಯಲ್ಲಿ ಬೀದಿ ವ್ಯಾಪಾರಿಗಳು ಹೆಚ್ಚಾಗಿದ್ದು ವೆಂಡರ್ ಜೋನ್ ಮಾಡಲು ಸೂಕ್ತ ಸ್ಥಳ ಸೂಚಿಸಲು ತಿಳಿಸಿದರು.
4. ವಾರ್ಡ್ ವ್ಯಾಪ್ತಿಯ ಸುಂದರ್ ಆಸ್ಪತ್ರೆ ರಸ್ತೆಯನ್ನು ಹೊಸದಾಗಿ ನಿರ್ಮಿಸಲು ಸೂಚಿಸಿದರು.

5. ವಾರ್ಡ್ ವ್ಯಾಪ್ತಿಯ ಲಾಜಾರ್ ಮುಖ್ಯರಸ್ತೆ ಹಾಗೂ ರಿಚ್ಚರ್ಡ್ ಪಾರ್ಕ್ ಸುತ್ತಮುತಲ್ಲಿನ ಫೂಟ್‌ಪಾತ್‌ಗಳನ್ನು ರೀಪೇರಿ ಮಾಡಲು ಸೂಚಿಸಿದರು.

ಕ್ರಮ : ಈ ಮೇಲೆ ಸೂಚಿಸಿರುವ ಸಮಸ್ಯೆಗಳಿಗೆ ಶಿಘ್ರದಲ್ಲೆ ಪರಿಹರಿಸುವಂತೆ ಈ ಸಭೆ ಮುಖಾಂತರ ಸೂಚಿಸಲಾಯಿತು.

➢ **ಪೊಲೀಸ್ ಇಲಾಖೆಗೆ (ಟ್ರಾಫಿಕ್) ಸಂಬಂದಿಸಿರುವುದು**

1. ವಾರ್ಡ್ ವ್ಯಾಪ್ತಿಯ ಗಾಸ್ಪಾಲ್ ಸ್ಟ್ರೀಟ್‌ನಲ್ಲಿ ರಸ್ತೆ ಬದಿ ವಾಹನಗಳನ್ನು (Dead Vehicals) ಕೂಡಲೆ ತೇರೆವುಗೋಳಿಸಲು ಸೂಚಿಸಿದರು.

2. ವಾರ್ಡ್ ವ್ಯಾಪ್ತಿಯಲ್ಲಿ ಅನಧಿಕೃತವಾಗಿ ಪಾರ್ಕಿಂಗ್ ಮಾಡುತ್ತಿದ್ದು ಕೂಡಲೆ ಕ್ರಮ ವಹಿಸಲು ಸೂಚಿಸಿದರು.

ಕ್ರಮ : ಪೊಲೀಸ್ ಸಭ್-ಇನ್‌ಪೇಕ್ಟರ್‌ರವರು ಲಿಖಿತ ಪೂರಕವಾಗಿ ಕಂಪ್ಲೆಂಟ್ ನೀಡಬೇಕೆಂದು ಸೂಚಿಸಿದರು.

<u>ಸೂಚನೆ</u> : 1) ಬೆಸ್ಕಾಂ ಇಲಾಖೆ 2) ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ 3) ಪೊಲೀಸ್ (ಸಿವಿಲ್) ಇಲಾಖೆ 3) ಪೊಲೀಸ್ (ಟ್ರಾಫಿಕ್) ಇಲಾಖೆ 5) ಅರಣ್ಯ ಇಲಾಖೆ, ಸದರಿ ಸೂಚಿಸಿದಂತ ಇಲಾಖೆಗಳಿಗೆ ಸಂಬಂದಿಸಿದ ಪ್ರತಿನಿಧಿಗಳು ಸಭೆಗೆ ಹಾಜರಿರದ ಕಾರಣ ಮುಂದಿನ ಸಭೆಗೆ ಕಡ್ಡಾಯವಾಗಿ ಸಾರ್ವಜನಿಕರ ಕುಂದು ಕೊರತೆಗಳನ್ನು ಚರ್ಚಿಸಲು ತಪ್ಪದೆ ಹಾಜರಾಗಲು ಸೂಚಿಸಿದೆ. ಮುಂದಿನ ಸಭೆಯ ದಿನಾಂಕವನ್ನು ವಾಟ್ಸಾಪ್ ಮುಖಾಂತರ ನಿಮ್ಮ ಗಮನಕ್ಕೆ ತರಲಾಗುವುದು ಮತ್ತು ಹಾಜರಾಗದ ಪಕ್ಷದಲ್ಲಿ ಮೇಲಾಧಿಕಾರಿಗಳ ಗಮನಕ್ಕೆ ತರಲಾಗುವುದು.

ಈ ಎಲ್ಲಾ ವಿಷಯಗಳ ಬಗ್ಗೆ ತುರ್ತಾಗಿ ಕ್ರಮ ಕೈಗೊಳ್ಳಲು ಸಂಬಂದಪಟ್ಟವರಿಗೆ ಸೂಚಿಸುತ್ತಾ ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಿದೆ.

ಸದಸ್ಯ ಕಾರ್ಯದರ್ಶಿ-60          ನೋಡಲ್ ಅಧಿಕಾರಿ-60

ಪ್ರತಿಗಳನ್ನು:

1. ಮಾನ್ಯ ಆಡಳಿತಾಧಿಕಾರಿ, ಬಿ.ಬಿ.ಎಂ.ಪಿ ರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮಾನ್ಯ ವಲಯ ಆಯುಕ್ತರು ರವರ ಮಾಹಿತಿಗಾಗಿ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ
4. ಮುಖ್ಯ ಅಭೀಯಂತರರು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.
5. ಕಾರ್ಯಪಾಲಕ ಅಭಿಯಂತರರು, ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆ.ಜಿ.ಹಳ್ಳಿ ಉಪ-ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು (ಘನ ತ್ಯಾಜ್ಯ) ಪುಲಕೇಶಿನಗರ ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
8. ಸಹಾಯಕ ಕಂದಾಯ ಅಧಿಕಾರಿ (ಕೆ.ಜಿ. ಹಳ್ಳಿ) ಉಪವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬೆಸ್ಕಾಂ) ರವರ ಮಾಹಿತಿಗಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು (ಎಲೆಕ್ಟ್ರೀಕಲ್) ಬಿ.ಬಿ.ಎಂ.ಪಿ. ಮೆಯೋಹಾಲ್ ರವರ ಮಾಹಿತಿಗಾಗಿ ಸಲ್ಲಿಸಿದೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು (ಬಿ.ಡಬ್ಲ್ಯೂ.ಎಸ್.ಎಸ್.ಬಿ) ನೇತಾಜಿ ರಸ್ತೆ, ರವರ ಮಾಹಿತಿಗಾಗಿ ಸಲ್ಲಿಸಿದೆ.
12. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.
13. ಪೊಲೀಸ್ ಇನ್ಸ್‌ಪೆಕ್ಟರ್ (ಸಿವಿಲ್) ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.
14. ಪೊಲೀಸ್ ಇನ್ಸ್‌ಪೆಕ್ಟರ್ (ಟ್ರಾಫಿಕ್) ಕೆ.ಜಿ.ಹಳ್ಳಿ ರವರ ಮಾಹಿತಿಗಾಗಿ ಸಲ್ಲಿಸಿದೆ.

15. ಪೊಲೀಸ್ ಇನ್ಸ್‌ಪೆಕ್ಟರ್(ಟ್ರಾಫಿಕ್) ಪುಲಿಕೇಶಿನಗರ ರವರ ಮಾಹಿತಿಗಾಗಿ ಸಲ್ಲಿಸಿದೆ.

16. ವಲಯ ಅರಣ್ಯಾಧಿಕಾರಿಗಳು (ಪೂರ್ವ) ರವರ ಮಾಹಿತಿಗಾಗಿ ಸಲ್ಲಿಸಿದೆ.

17. ಕಛೇರಿ ಪ್ರತಿ.